05 AUG 2013

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಿ.ಎಲ್.ಡಿ.ಇ. ಅಸೋಸಿಯೇಷನ್‌ರವರ ಔಷಧ ವಿಜ್ಞಾನಗಳ ಮಹಾವಿದ್ಯಾಲಯ, ಬಿಜಾಪುರ ಇವರಿಗೆ 2012-13ನೇ ಸಾಲಿನಿಂದ ಎಂ.ಫಾರ್ಮ(ಕ್ವಾಲಿಟಿ ಅಶ್ಯೂರೆನ್ಸ್) ಕೋರ್ಸ್‌ನ್ನು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ಎಸಿಎ/ಪಿಹೆಚ್-26/2012-13, ದಿನಾಂಕ:13.08.2012.

*****

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ:13.08.2012ರ ಪತ್ರದಲ್ಲಿ ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು ಇವರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಬಿ.ಎಲ್.ಡಿ.ಇ. ಅಸೋಸಿಯೇಷನ್‌ರವರ ಔಷಧ ವಿಜ್ಞಾನಗಳ ಮಹಾವಿದ್ಯಾಲಯ, ಬಿಜಾಪುರ ಇವರಿಗೆ 2012-13ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಎಂ.ಫಾರ್ಮ (ಕ್ವಾಲಿಟಿ ಅಶ್ಯೂರೆನ್ಸ್) ಕೋರ್ಸ್‌ನ್ನು 10 ಸೀಟುಗಳ ಪ್ರವೇಶಮಿತಿಯೊಂದಿಗೆ ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡುವಂತೆ ಶಿಫಾರಸು ಮಾಡುತ್ತಾ, ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಬಿ.ಎಲ್.ಡಿ.ಇ. ಅಸೋಸಿಯೇಷನ್‌ರವರ ಔಷಧ ವಿಜ್ಞಾನಗಳ ಮಹಾವಿದ್ಯಾಲಯ, ಬಿಜಾಪುರ ಇವರಿಗೆ 2012-13ನೇ ಶೈಕ್ಷಣಿಕ ಸಾಲಿನಿಂದ ಎಂ.ಫಾರ್ಮ (ಕ್ವಾಲಿಟಿ ಅಶ್ಯೂರೆನ್ಸ್) ಕೋರ್ಸ್‌ನ್ನು ಹೊಸದಾಗಿ 10 ಸೀಟುಗಳ ಪ್ರವೇಶಮಿತಿಯೊಂದಿಗೆ ಪ್ರಾರಂಭಿಸಲು ಅನುಮತಿ ನೀಡಲು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 359 ಪಿಟಿಡಿ 2012**

**ಬೆಂಗಳೂರು,. ದಿನಾಂಕ:27.07.2013**

1994ರ. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 45(5)ನೇ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಬಿ.ಎಲ್.ಡಿ.ಇ. ಅಸೋಸಿಯೇಷನ್‌ರವರ ಔಷಧ ವಿಜ್ಞಾನಗಳ ಮಹಾವಿದ್ಯಾಲಯ, ಬಿಜಾಪುರ ಇವರಿಗೆ 2012-13ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಎಂ.ಫಾರ್ಮ (ಕ್ವಾಲಿಟಿ ಅಶ್ಯೂರೆನ್ಸ್) ಕೋರ್ಸ್‌ನ್ನು 10 ಸೀಟುಗಳ ಪ್ರವೇಶಮಿತಿಯೊಂದಿಗೆ ಪ್ರಾರಂಭಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ ಹಾಗೂ ಸಂಯೋಜನೆ ನೀಡಲು ಶಿಫಾರಸ್ಸು ಮಾಡಲಾಗಿದೆ:

1. ಪ್ರಸ್ತಾಪಿಸಿರುವ ಕೋರ್ಸ್‌ನ್ನು ಸೀಟುಗಳನ್ನು ಹೆಚ್ಚಿಸಿಕೊಳ್ಳಲು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್, ನವದೆಹಲಿ ಇವರಿಂದ ಅನುಮೋದನೆಯನ್ನು ಪಡೆದಿರುವುದನ್ನು ದೃಢಪಡಿಸಿಕೊಂಡ ನಂತರವೇ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಅಂತಿಮ ಸಂಯೋಜನೆಯನ್ನು ನೀಡತಕ್ಕದ್ದು.
2. ಸಂಯೋಜನೆಯ ಬಗ್ಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮತಿ ಪಡೆಯತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.

4. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ/ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗಧಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜುಗಳಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಅನುಮೋದಿತ ಎಂ–ಫಾರ್ಮ ಕೋರ್ಸ್‌ನ ಸೀಟುಗಳಲ್ಲಿ ಶೇಕಡ 50ರಷ್ಟು ಸೀಟುಗಳನ್ನು ಸರ್ಕಾರಿ ಸೀಟುಗಳಾಗಿ ಬಿಟ್ಟು ಕೊಡತಕ್ಕದ್ದು.
8. ಸರ್ಕಾರವು ನಿಗದಿಪಡಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಎನ್.ಹರಿಣಿಯಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

ಇವರಿಗೆ:

1. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು– 41.
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು–01
3. ಪ್ರಾಚಾರ್ಯರು, ಬಿ.ಎಲ್.ಡಿ.ಇ. ಅಸೋಸಿಯೇಷನ್‌ರವರ ಔಷಧ ವಿಜ್ಞಾನಗಳ ಮಹಾವಿದ್ಯಾಲಯ, ಸೋಲಾಪುರ ರಸ್ತೆ, ಬಿಜಾಪುರ
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
5. ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

B.L.D.E. Association's
College of Pharmacy
Bijapur.
Inward No. 47
Date 5/8/2013